**All India Radio: Bangalore**
**National Bulletin In Kannada**
**28.06.2026 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**28.06.2026 7.35 am**

**<>><><*><><<>**

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ ಸೆಶೆಲ್ಸ್ ಅಧ್ಯಕ್ಷರೊಂದಿಗೆ ಇಂದು ಮಹತ್ವದ ಭೇಟಿ; ದ್ವಿಪಕ್ಷೀಯ ಸಹಕಾರದ ಕುರಿತು ಚರ್ಚೆ

೨. ಇಂದು ಬೆಳಗ್ಗೆ ೧೧ ಗಂಟೆಗೆ ಪ್ರಧಾನಿ ನರೇಂದ್ರ ಮೋದಿ ಭಾರತೀಯರನ್ನುದ್ದೇಶಿಸಿ ಮನದಾಳದ ಮಾತು

೩. ವೆನೆಜುವೆಲಾ ಪ್ರಬಲ ಭೂಕಂಪ; ಮೃತರ ಸಂಖ್ಯೆ ೧ ಸಾವಿರದ ೪೩೦ಕ್ಕೆ ಏರಿಕೆ

೪. ಅಗತ್ಯ ದಾಖಲೆಗಳಿಲ್ಲದೆ ಕೈಲಾಸ ಮಾನಸ ಸರೋವರ ಯಾತ್ರೆ ಪ್ರಾರಂಭಿಸದಂತೆ ದೇಶದ ನಾಗರಿಕರಿಗೆ ವಿದೇಶಾಂಗ ಸಚಿವಾಲಯ ಸೂಚನೆ

೫. ಯುಎಸ್ ಓಪನ್ ಬ್ಯಾಡ್ಮಿಂಟನ್; ಪುರುಷರ ಸಿಂಗಲ್ಸ್‌ನ ಫೈನಲ್ ಪ್ರವೇಶಿಸಿದ ಭಾರತದ ಕಿಡಂಬಿ ಶ್ರೀಕಾಂತ್

**<>><><*><><<>**

ಪ್ರಧಾನ ಮಂತ್ರಿ ನರೇಂದ್ರ ಮೋದಿ ಇಂದು ಸೆಶೆಲ್ಸ್ ಅಧ್ಯಕ್ಷ ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ಉಭಯ ನಾಯಕರು ದ್ವಿಪಕ್ಷೀಯ ಸಹಕಾರದ ಕುರಿತು ಚರ್ಚಿಸಲಿದ್ದಾರೆ. ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ. ಇಂದು, ಪ್ರಧಾನಿ ನರೇಂದ್ರ ಮೋದಿ ಅವರು ಸೆಶೆಲ್ಸ್ ರಾಷ್ಟ್ರೀಯ ಶಾಸನ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಮತ್ತು ಭಾರತೀಯ ಸಮುದಾಯದೊಂದಿಗೆ ಸಂವಾದ ನಡೆಸಲಿದ್ದಾರೆ. ನಂತರ, ಪ್ರಧಾನಿ ರೋಚೆ ಕೈಮನ್‌ನಲ್ಲಿ ನಡೆಯುವ ರಾಷ್ಟ್ರೀಯ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ. ಎರಡು ಭಾರತೀಯ ನೌಕಾಪಡೆಯ ಹಡಗುಗಳೊಂದಿಗೆ ಭಾರತೀಯ ರಕ್ಷಣಾ ಪಡೆಗಳ ಒಂದು ತುಕಡಿ ಆಚರಣೆಯಲ್ಲಿ ಭಾಗವಹಿಸಲಿದೆ ಎಂದು ಸಚಿವಾಲಯ ತಿಳಿಸಿದೆ. ಸೆಶೆಲ್ಸ್ ರಾಷ್ಟ್ರೀಯ ದಿನದ ಸುವರ್ಣ ಮಹೋತ್ಸವ ಆಚರಣೆಯಲ್ಲಿ

ಗೌರವಾನ್ವಿತ ಅತಿಥಿಯಾಗಿ ಭಾಗವಹಿಸಲು ಪ್ರಧಾನಿ ನರೇಂದ್ರ ಮೋದಿ ಅವರು ಮೂರು ದಿನಗಳ ಭೇಟಿಯಲ್ಲಿದ್ದಾರೆ. ಈ ಭೇಟಿಯು, ಭಾರತ ಮತ್ತು ಸೆಶೆಲ್ಸ್ ನಡುವಿನ ಬಲವಾದ ಮತ್ತು ಶಾಶ್ವತ ಸ್ನೇಹವನ್ನು ಪುನರುಚ್ಚರಿಸುತ್ತದೆ ಮತ್ತು ಎಲ್ಲಾ ವಲಯಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ಹೆಚ್ಚಿಸಲು ಉಭಯ ರಾಷ್ಟ್ರಗಳ ಹಂಚಿಕೆಯ ಬದ್ಧತೆಯನ್ನು ಬಲಪಡಿಸುತ್ತದೆ.

<>><><*><><<>

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೩೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

<>><><*><><<>

ಬೆಂಗಳೂರಿನಲ್ಲಿ ಇಂದು ನಡೆಯಲಿರುವ ನಶಾ ಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಭಾಗವಹಿಸಲಿದ್ದಾರೆ. ಈ ಸಮಾವೇಶವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಹಾಗೂ ಅಂತಾರಾಷ್ಟ್ರೀಯ ಮಾದಕವಸ್ತು ವಿರೋಧಿ ಮತ್ತು ಅಕ್ರಮ ಸಾಗಣೆ ತಡೆ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದೆ.

<>><><*><><<>

ವೆನೆಜುವೆಲಾದಲ್ಲಿ ಸಂಭವಿಸಿದ ವಿನಾಶಕಾರಿ ಭೂಕಂಪದಲ್ಲಿ ಮೃತಪಟ್ಟವರ ಸಂಖ್ಯೆ ೧ ಸಾವಿರದ ೪೩೦ಕ್ಕೆ ಏರಿಕೆಯಾಗಿದೆ. ಕಳೆದ ಬುಧವಾರ ದಕ್ಷಿಣ ಅಮೆರಿಕದ ಈ ರಾಷ್ಟ್ರದಲ್ಲಿ ೭.೨ ಮತ್ತು ೭.೫ ತೀವ್ರತೆಯ ಸರಣಿ ಭೂಕಂಪಗಳಿಂದ ತತ್ತರಿಸಿದ ಜನರಿಗಾಗಿ ರಕ್ಷಣಾ ಸಿಬ್ಬಂದಿ ಕಾರ್ಯಾಚರಣೆ ಮುಂದುವರಿಸಿದ್ದಾರೆ. ಪ್ರಸ್ತುತ ಲಭ್ಯವಿರುವ ಮಾಹಿತಿಯ ಪ್ರಕಾರ, ಕನಿಷ್ಠ ೨೮ ಸಾವಿರದ ೯೦೦ ಜನರು ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ. ವೆನೆಜುವೆಲಾದಲ್ಲಿ ಅತ್ಯಂತ ತೀವ್ರವಾಗಿ ಹಾನಿಗೊಳಗಾದ ರಾಜ್ಯಗಳಲ್ಲಿ ಒಂದಾದ ಲಾ ಗ್ವೈರಾದಲ್ಲಿ, ಕಾಂಕ್ರೀಟ್ ಅವಶೇಷಗಳ ನಡುವೆ

ತಮ್ಮ ಪ್ರೀತಿಪಾತ್ರರನ್ನು ಮತ್ತು ನೆರೆಹೊರೆಯವರನ್ನು ಹುಡುಕಲು ಸ್ಥಳೀಯರು ಗುದ್ದಲಿ, ಭಾರಿ ಯಂತ್ರೋಪಕರಣಗಳು, ಹಗ್ಗಗಳು ಹಾಗೂ ಬರಿಗೈಗಳ ಸಹಾಯದಿಂದ ನಿರಂತರವಾಗಿ ಶೋಧಕಾರ್ಯ ನಡೆಸುತ್ತಿದ್ದಾರೆ.

<>><><*><><<>

ಭಾರತ-ಬ್ರಿಟನ್ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ-ಸಿಇಟಿಎ ಅಡಿಯಲ್ಲಿ ಇರುವ ಅವಕಾಶಗಳನ್ನು ದೀರ್ಘಕಾಲೀನ ವ್ಯವಹಾರ ವೃದ್ಧಿಯಾಗಿ ಪರಿವರ್ತಿಸಲು, ಭಾರತೀಯ ಕಂಪನಿಗಳು ತಮ್ಮ ಬ್ರಿಟನ್‌ನ ಸಹಭಾಗಿ ಸಂಸ್ಥೆಗಳೊಂದಿಗೆ ಸಹಕಾರವನ್ನು ಮತ್ತಷ್ಟು ಬಲಪಡಿಸಬೇಕು ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕರೆ ನೀಡಿದ್ದಾರೆ. ಲಂಡನ್‌ನಲ್ಲಿ ನಡೆದ 'ಭಾರತ-ಬ್ರಿಟನ್ ಪ್ರಗತಿಯ ಪಾಲುದಾರರು' ವ್ಯಾಪಾರ ಸಮಾವೇಶದ ಅಧ್ಯಕ್ಷತೆ ವಹಿಸಿ ಮಾತನಾಡಿದ ಸಚಿವರು, ಸಿಇಟಿಎ ಒಪ್ಪಂದದಿಂದ ದೊರೆಯುವ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಳ್ಳುವಂತೆ ಉದ್ಯಮ ವಲಯಕ್ಕೆ ಸಲಹೆ ನೀಡಿದರು. ಈ ಕುರಿತು ಮಾಹಿತಿ ನೀಡಿರುವ ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ, ಉಭಯ ದೇಶಗಳ ಪ್ರಮುಖ ಕೈಗಾರಿಕಾ ಪ್ರತಿನಿಧಿಗಳು ಸಮಾವೇಶದಲ್ಲಿ ಭಾಗವಹಿಸಿದ್ದು, ಸಿಇಟಿಎ ಒಪ್ಪಂದವನ್ನು ದ್ವಿಪಕ್ಷೀಯ ವ್ಯಾಪಾರ ಮತ್ತು ಹೂಡಿಕೆ ಸಂಬಂಧಗಳನ್ನು ಬಲಪಡಿಸುವ ಪರಿವರ್ತನಾತ್ಮಕ ಚೌಕಟ್ಟಾಗಿ ಸ್ವಾಗತಿಸಿದ್ದಾರೆ ಎಂದು ತಿಳಿಸಿದೆ.

<>><><*><><<>

ಕೈಲಾಸ ಮಾನಸ ಸರೋವರ ಯಾತ್ರೆಗೆ ಅಗತ್ಯವಿರುವ ಎಲ್ಲಾ ಪ್ರಯಾಣ ದಾಖಲೆಗಳನ್ನು ಪಡೆಯುವವರೆಗೆ ಯಾತ್ರೆಯನ್ನು ಪ್ರಾರಂಭಿಸಬೇಡಿ ಎಂದು ವಿದೇಶಾಂಗ ಸಚಿವಾಲಯ ದೇಶದ ನಾಗರಿಕರಿಗೆ ಸೂಚಿಸಿದೆ. ಚೀನಾಕ್ಕೆ ಪ್ರವೇಶ ಪರವಾನಗಿ ಮತ್ತು ವೀಸಾಗಳಿಲ್ಲದೆ, ಖಾಸಗಿ ಪ್ರವಾಸ ನಿರ್ವಾಹಕರ ಪ್ರವಾಸಗಳ ಮೂಲಕ ಯಾತ್ರೆ ಕೈಗೊಳ್ಳುವಾಗ ನೇಪಾಳದಲ್ಲಿ ಸಿಲುಕಿರುವ ಭಾರತೀಯ ನಾಗರಿಕರು, ಸಹಾಯಕ್ಕಾಗಿ ವಿನಂತಿಸಿದ ನಂತರ ಸಚಿವಾಲಯವು ಈ ಸಲಹೆಯನ್ನು ನೀಡಿದೆ. ದೃಢೀಕೃತ ಪ್ರಯಾಣ ದಾಖಲೆಗಳಿಲ್ಲದೆ ಅಥವಾ ಅಗತ್ಯ ದಾಖಲೆಗಳನ್ನು ಪಡೆಯುವ ನಿರೀಕ್ಷೆಯಲ್ಲಿ ಪ್ರಯಾಣವನ್ನು ಪ್ರಾರಂಭಿಸುವುದರಿಂದ ಯಾತ್ರಿಕರು ಸಿಲುಕಿಕೊಳ್ಳುವ ಸಾಧ್ಯತೆ ಹೆಚ್ಚಾಗುತ್ತದೆ ಎಂದು ಸಚಿವಾಲಯ ಹೇಳಿದೆ. ಯಾತ್ರೆ ಕೈಗೊಳ್ಳುವ ಮೊದಲು ತಮ್ಮ ಪ್ರವಾಸ ನಿರ್ವಾಹಕರು ಸರಿಯಾಗಿ ನೋಂದಾಯಿಸಿಕೊಂಡಿದ್ದಾರೆಯೇ ಮತ್ತು ಅಧಿಕೃತರಾಗಿದ್ದಾರೆಯೇ ಎಂದು ಪರಿಶೀಲಿಸಲು ಯಾತ್ರಿಕರಿಗೆ ಸಲಹೆ ನೀಡಿದೆ.

<>><><*><><<>

ಚಾರ್ ಧಾಮ್ ಯಾತ್ರೆಗಾಗಿ ಹೆಲಿಕಾಪ್ಟರ್ ಸೇವೆಗಳ ಮೊದಲ ಹಂತದ ಕಾರ್ಯಾಚರಣೆ ಯಶಸ್ವಿಯಾಗಿ ಪೂರ್ಣಗೊಂಡಿದೆ. ಈ ಕುರಿತು ಮಾಹಿತಿ ನೀಡಿರುವ ನಾಗರಿಕ ವಿಮಾನಯಾನ ಸಚಿವಾಲಯ, ಈ ಅವಧಿಯಲ್ಲಿ ಪ್ರತಿದಿನ ಸರಾಸರಿ ೪೦೦ ಹೆಲಿಕಾಪ್ಟರ್‌ಗಳ ಸಂಚಾರ ನಡೆದಿದೆ ಎಂದು ತಿಳಿಸಿದೆ. ಸಚಿವಾಲಯದ ಪ್ರಕಾರ, ೧೨ ಸಾವಿರಕ್ಕೂ ಹೆಚ್ಚು ಶಟಲ್ ಹಾರಾಟಗಳ ಮೂಲಕ ೬೭ ಸಾವಿರಕ್ಕೂ ಹೆಚ್ಚು ಯಾತ್ರಿಕರ ಪ್ರಯಾಣಕ್ಕೆ ಅನುಕೂಲ ಕಲ್ಪಿಸಲಾಗಿದೆ. ಅಲ್ಲದೆ, ೨ ಸಾವಿರಕ್ಕೂ ಹೆಚ್ಚು ಚಾರ್ಟರ್ ಹಾರಾಟಗಳ ಮೂಲಕ ೧೧ ಸಾವಿರಕ್ಕೂ ಅಧಿಕ ಭಕ್ತರಿಗೆ ಸುರಕ್ಷಿತ, ವಿಶ್ವಾಸಾರ್ಹ ಹಾಗೂ ಪರಿಣಾಮಕಾರಿ ಸಂಪರ್ಕ ವ್ಯವಸ್ಥೆ ಒದಗಿಸಲಾಗಿದೆ ಎಂದು ತಿಳಿಸಿದೆ. ಈ ಕುರಿತು ಮಾತನಾಡಿರುವ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಚಾರ್ ಧಾಮ ಯಾತ್ರೆ ಕೈಗೊಳ್ಳುವ ಪ್ರತಿಯೊಬ್ಬ ಭಕ್ತರೂ ಹೆಚ್ಚಿನ ಸುಲಭತೆ, ಅನುಕೂಲತೆ ಹಾಗೂ ಸುರಕ್ಷತೆಯೊಂದಿಗೆ ಪ್ರಯಾಣಿಸುವಂತೆ ಮಾಡಲು ಕೇಂದ್ರ ಸರ್ಕಾರ ವಿಶೇಷ ಆದ್ಯತೆ ನೀಡಿದೆ ಎಂದು ಹೇಳಿದ್ದಾರೆ.

<>><><*><><<>

ಕಳೆದ ೧೨ ವರ್ಷಗಳಲ್ಲಿ ಭಾರತವು ಆರೋಗ್ಯ ರಕ್ಷಣೆಯಲ್ಲಿ ಗಮನಾರ್ಹ ಪ್ರಗತಿಯನ್ನು ಸಾಧಿಸಿದೆ ಮತ್ತು ಪ್ರತಿಯೊಬ್ಬ ನಾಗರಿಕರಿಗೂ ಕೈಗೆಟುಕುವ ಮತ್ತು ಗುಣಮಟ್ಟದ ಆರೋಗ್ಯ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವ ಸಾರ್ವತ್ರಿಕ ಆರೋಗ್ಯ ವ್ಯಾಪ್ತಿಯ ವಿಶಾಲ ಗುರಿಯತ್ತ ಕೆಲಸ ಮಾಡುತ್ತಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ. ಖಾಸಗಿ ಮಾಧ್ಯಮ ವಾಹಿನಿ ಕಾರ್ಯಕ್ರಮದ ೯ನೇ ಆವೃತ್ತಿಯ ವೈದ್ಯರ ದಿನದ ಸಮ್ಮೇಳನದಲ್ಲಿ ಮಾತನಾಡಿದ ಅವರು, ಸರ್ಕಾರವು ತನ್ನ ಆರೋಗ್ಯ ವಿಧಾನವನ್ನು ಅನಾರೋಗ್ಯ ಪೀಡಿತರ ಆರೈಕೆಯಿಂದ ಯೋಗಕ್ಷೇಮಕ್ಕೆ ಮತ್ತು ಸಂಪೂರ್ಣವಾಗಿ ಗುಣಪಡಿಸುವ ಆರೈಕೆಯಿಂದ ಸಮಗ್ರ ಆರೋಗ್ಯ ರಕ್ಷಣೆಗೆ ಬದಲಾಯಿಸಿದೆ ಎಂದು ಹೇಳಿದರು.

<>><><*><><<>

ಅಮೆರಿಕದ ಕ್ಯಾಲಿಫೋರ್ನಿಯಾದ ಫುಲ್ಲರ್ಟನ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಕಿಡಂಬಿ ಶ್ರೀಕಾಂತ್ ಪುರುಷರ ಸಿಂಗಲ್ಸ್‌ನ ಫೈನಲ್ಸ್ ಪ್ರವೇಶಿಸಿದ್ದಾರೆ. ಇಂದು ಬೆಳಿಗ್ಗೆ ನಡೆದ ಸೆಮಿಫೈನಲ್ ನಲ್ಲಿ ಅವರು, ಜಪಾನ್ ನ ಯುದೈ ಒಕಿಮೊತೊ ವಿರುದ್ಧ ೨೨-೨೦, ೧೫-೨೧, ೨೧-೧೯ ಸೆಟ್ ಗಳ ಅಂತರದಲ್ಲಿ ಗೆಲುವು ದಾಖಲಿಸಿದರು. ಮತ್ತೊಂದು ಸೆಮಿಫೈನಲ್‌ನಲ್ಲಿ ಚೈನೀಸ್ ತೈಪೆಯ ಸು ಲಿ ಯಾಂಗ್ ಅವರನ್ನು ರೌನಕ್ ಚೌಹಾಣ್ ಎದುರಿಸುತ್ತಿದ್ದಾರೆ.

<>><><*><><<>

ಗೋವಾದ ೧೪ ವರ್ಷದ ಇಂಟರ್‌ನ್ಯಾಷನಲ್ ಮಾಸ್ಟರ್ ಈಥನ್ ವಾಜ್, ಬೋಸ್ನಿಯಾ ಮತ್ತು ಹರ್ಜೆಗೋವಿನಾದಲ್ಲಿ ನಡೆದ ಸರಜೆವೊ ಜಿಎಂ ಮಿಕ್ಸ್ ಚೆಸ್ ಪಂದ್ಯಾವಳಿಯಲ್ಲಿ ತಮ್ಮ ಮೂರನೇ ಹಾಗೂ ಅಂತಿಮ ಗ್ರ್ಯಾಂಡ್ ಮಾಸ್ಟರ್ ನಾರ್ಮ್ ಸಾಧಿಸುವ ಮೂಲಕ ಭಾರತದ ೯೬ನೇ ಚೆಸ್ ಗ್ರಾಂಡ್‌ಮಾಸ್ಟರ್ ಆಗಿ ಹೊರಹೊಮ್ಮಿದ್ದಾರೆ.  ಹತ್ತು ಗ್ರಾಂಡ್‌ಮಾಸ್ಟರ್‌ಗಳನ್ನು ಹಿಂದಿಕ್ಕಿ ಈ ಟೂರ್ನಿಯಲ್ಲಿ ಜಯಗಳಿಸಿದ ಇವರು, ಅನುರಾಗ್ ಮ್ಹಮಾಲ್ ಮತ್ತು ಲಿಯೋನ್ ಮೆಂಡೋನ್ಕಾ ಅವರ ನಂತರ ಗೋವಾದ ಮೂರನೇ ಗ್ರಾಂಡ್‌ಮಾಸ್ಟರ್ ಎನಿಸಿಕೊಂಡಿದ್ದಾರೆ. ಸೆಪ್ಟೆಂಬರ್ ೩, ೨೦೧೧ ರಂದು ಜನಿಸಿದ ಈಥನ್ ಪ್ರಸ್ತುತ ೨ ಸಾವಿರದ ೫೨೨ ಫಿಡೆ ಶ್ರೇಯಾಂಕ ಹೊಂದಿದ್ದಾರೆ.

<>><><*><><<>

ಫಿಫಾ ವಿಶ್ವಕಪ್‌ನ ಫುಟ್ಬಾಲ್ ಪಂದ್ಯಾವಳಿಯ ಎಲ್ ಗುಂಪಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡವು ಪನಾಮ ವಿರುದ್ಧ ೨-೦ ಗೋಲುಗಳ ಅಂತರದಿಂದ ಜಯಗಳಿಸಿದೆ. ಅಮೆರಿಕದ ನ್ಯೂಜೆರ್ಸಿ ಸ್ಟೇಡಿಯಂನಲ್ಲಿ ಇಂದು ಬೆಳಿಗ್ಗೆ ನಡೆದ ಪಂದ್ಯದಲ್ಲಿ ಇಂಗ್ಲೆಂಡ್ ಪರ ಜೂಡ್ ಬೆಲ್ಲಿಂಗ್ಹ್ಯಾಮ್ ಮತ್ತು ಹ್ಯಾರಿ ಕೇನ್ ತಲಾ ಒಂದು ಗೋಲು ಗಳಿಸುವ ಮೂಲಕ ತಂಡಕ್ಕೆ ಜಯ ತಂದುಕೊಟ್ಟರು, ಈ ಗೆಲುವಿನ ಬೆನ್ನಲ್ಲೆ ಎಲ್ ಗುಂಪಿನಲ್ಲಿ ಇಂಗ್ಲೆಂಡ್ ಅಗ್ರಸ್ಥಾನವನ್ನು ಭದ್ರಪಡಿಸಿಕೊಂಡಿದೆ. ಇದೇ ಗುಂಪಿನ ಮತ್ತೊಂದು ಪಂದ್ಯದಲ್ಲಿ ಕ್ರೊಯೇಷಿಯಾ ತಂಡವು ಘಾನಾ ವಿರುದ್ಧ ೨-೧ ಗೋಲುಗಳ ಅಂತರದಿಂದ ಗೆಲುವು ಸಾಧಿಸಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>